# ಕರ್ನಾಟಕ ವಿಧಾನ ಪರಿಷತ್ತು

157 ಡೆ 6 = 164
4RK
020126

## ನಿಯಮ 72 ರ ಮೇರೆಗೆ

## ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ ಇವರ ಪ್ರಶ್ನೆಗೆ ಉತ್ತರಿಸುವ ಬಗ್ಗೆ.

**ಪ್ರಶ್ನೆ:** ರಾಯಚೂರು ಜಿಲ್ಲೆ ಸಿರವಾರ ತಾಲ್ಲೂಕಿನ ಅತ್ತನೂರು ಗ್ರಾಮದಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆಯಿದ್ದು, ಈಗಾಗಲೇ ಸದರಿ ಗ್ರಾಮಕ್ಕೆ ಮಂಜೂರಾಗಿದ್ದ (ಎಂವಿಎಸ್) ಬಹುಗ್ರಾಮ ಕುಡಿಯುವ ನೀರು ಯೋಜನೆಯನ್ನು ಮುಂದುವರೆಸುವುದು ಮತ್ತು ಸದರಿ ಯೋಜನೆಯಡಿ ಕಾಮಗಾರಿ ಅನುಷ್ಠಾನಕ್ಕೆ ಕೈಗೆತ್ತಿಗೊಂಡಿದ್ದ (ಆರ್‌ಡಬ್ಲ್ಯೂಎಸ್) ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆ ಮಾಲೀಕತ್ವದಲ್ಲಿನ ಕೆರೆ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಿ ಸದರಿ (17 ಎಕರೆ 17 ಗುಂಟೆ ವಿಸ್ತೀರ್ಣ) ಕೆರೆಯನ್ನು ಸದ್ಬಳಕೆ ಮಾಡಿಕೊಂಡು ಅತ್ತನೂರು ಗ್ರಾಮಕ್ಕೆ ಸಂಪೂರ್ಣ ಶಾಶ್ವತ ಕುಡಿಯುವ ನೀರು ಸೌಲಭ್ಯವನ್ನು ತುರ್ತಾಗಿ ಒದಗಿಸಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರ ಗಮನ ಸೆಳೆಯ ಬಯಸುತ್ತೇನೆ

**ಉತ್ತರ:** ರಾಜೀವ್ ಗಾಂಧಿ ಸಬ್‌ಮಿಷನ್ ಯೋಜನೆಯಡಿ ರಾಯಚೂರು ಜಿಲ್ಲೆಯ ಸಿರವಾರ ತಾಲ್ಲೂಕಿನ ಕಲ್ಲೂರು ಮತ್ತು ಇತರೆ 1 ಗ್ರಾಮ ಹಾಗೂ ಅತ್ತನೂರು ಮತ್ತು ಇತರೆ 7 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು 2008-09 ರಲ್ಲಿ ಯೋಜನೆಯು ಮಂಜೂರಾಗಿತ್ತು. ಸದರಿ 2 ಯೋಜನೆಗಳನ್ನು ಪ್ಯಾಕೇಜ್ ಮಾಡಿ ಟೆಂಡರ್ ಕರೆದು, ಕಾಮಗಾರಿಯನ್ನು ನಿರ್ವಹಿಸಲು ದಿನಾಂಕ:02.02.2009ರಂದು ಕಾರ್ಯಾದೇಶವನ್ನು ನೀಡಲಾಗಿತ್ತು. ಗುತ್ತಿಗೆದಾರರು ಕಾಮಗಾರಿಯನ್ನು ನಿರ್ವಹಿಸುವ ಸಮಯದಲ್ಲಿ ಕೆರೆ ನಿರ್ಮಾಣಕ್ಕೆಂದು ಅಂದಾಜು ಪತ್ರಿಕೆಯಲ್ಲಿ ಪರಿಗಣಿಸಿದ್ದ ಸ್ಥಳವು ಸೂಕ್ತವಾಗಿರದ ಕಾರಣದಿಂದ ಬೇರೆ ಸ್ಥಳವನ್ನು ಗುರುತಿಸಿ ಕಾಮಗಾರಿಯನ್ನು ನಿರ್ವಹಿಸಬೇಕಾಗಿತ್ತು.

ಅದರಂತೆ ಕೆರೆ ನಿರ್ಮಾಣಕ್ಕೆ ಸೂಕ್ತವಾದ ಬೇರೆ ಜಮೀನನ್ನು ದಿನಾಂಕ:09.02.2018ರಲ್ಲಿ ನೊಂದಣಿ ಮಾಡಿಕೊಳ್ಳಲಾಯಿತು. ತದನಂತರದಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ಗುತ್ತಿಗೆದಾರರಿಗೆ ಹಲವಾರು ಬಾರಿ ಸೂಚಿಸಿ ನೋಟೀಸ್ ನೀಡಿದ್ದರೂ ಸಹ ಗುತ್ತಿಗೆದಾರರು ಯಾವುದೇ ಪ್ರತಿಕ್ರಿಯೆ ನೀಡದೇ ಇರುವ ಕಾರಣದಿಂದ Risk & Cost ಆಧಾರದ ಮೇಲೆ ದಿನಾಂಕ:26.02.2020ರಂದು ಟೆಂಡರ್ ನಿಯಮಾನುಸಾರ ರದ್ದುಗೊಳಿಸಿದ್ದು, ಭದ್ರತಾ ಠೇವಣಿ ಮುಟ್ಟುಗೋಲು ಹಾಕಿ ಕೊಳ್ಳಲು ಆದೇಶ ಮಾಡಲಾಗಿರುತ್ತದೆ.

ಮುಂದುವರೆದು, ಮೇಲಿನ ಯೋಜನೆಯಿಂದ ಶುದ್ಧ ಕುಡಿಯುವ ನೀರನ್ನು ಒದಗಿಸಲು ಯೋಜಿಸಿದ್ದ ಎಲ್ಲಾ ಗ್ರಾಮಗಳಿಗೆ ಜಲ್ ಜೀವನ್ ಮಿಷನ್ ಯೋಜನೆಯಡಿ ಹಾಗೂ NABARD Infrastructure Development Assistance (NIDA)ನ ನೆರವಿನಿಂದ ರಾಯಚೂರು ಜಿಲ್ಲೆಯ ಎಲ್ಲಾ 1406 ಗ್ರಾಮೀಣ ಜನವಸತಿಗಳಿಗೆ ಹಾಗೂ 7 ನಗರ ಸ್ಥಳೀಯ ಸಂಸ್ಥೆಗಳಾದ ಮಾನ್ವಿ, ಮಸ್ಕಿ, ಕವಿತಾಳ, ತುರ್ವಿಹಾಳ, ಬಾಳಗನೂರು, ಸಿರವಾರ ಮತ್ತು ಹಟ್ಟಿ ಪಟ್ಟಣಕ್ಕೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಿಂದ ನೀರನ್ನು ಒದಗಿಸಲು ಯೋಜಿಸಲಾಗಿದ್ದು,

ದಿನಾಂಕ:04.06.2022ರಂದು ಕಾರ್ಯಾದೇಶ ನೀಡಿದ್ದು, ಪ್ರಸ್ತುತ ಯೋಜನೆಯ ಭೌತಿಕ ಪ್ರಗತಿಯು ಶೇ.69 ಆಗಿದ್ದು, ಆರ್ಥಿಕ ಪ್ರಗತಿಯು ಶೇ.53.35 ಆಗಿರುತ್ತದೆ. ಈ ಯೋಜನೆಯನ್ನು ಜೂನ್ 2026ರೊಳಗೆ ಪೂರ್ಣಗೊಳಿಸಿ ಯೋಜಿತ ಎಲ್ಲಾ ಜನವಸತಿಗಳಿಗೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಯೋಜಿಸಿದೆ. ಪ್ರಸ್ತುತ ಸಿರವಾರ ತಾಲ್ಲೂಕಿನ ಅತ್ತನೂರು ಗ್ರಾಮಕ್ಕೆ 5 ಕೊಳವೆ ಬಾವಿಗಳು ಹಾಗೂ ಶುದ್ಧ ಕುಡಿಯುವ ನೀರಿನ ಘಟಕದಿಂದ ನೀರನ್ನು ಒದಗಿಸಲಾಗುತ್ತಿದೆ.

RDWSD/CE/TECH/107/2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು